ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ: 23ನೇ ಜುಲೈ, 2019

ಆರೋಗ್ಯ ಇಲಾಖೆಯಲ್ಲಿರುವ ಅವ್ಯವಸ್ಥೆ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

100 (755) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ವೈದ್ಯರ ಕೊರತೆ ಇದೆಯೇ ; ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಸಮಯಕ್ಕೆ ಸರಿಯಾಗಿ ಕೆಲಸಕ್ಕೆ ಹಾಜರಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸರ್ಕಾರಿ ವೈದ್ಯರು ಆಸ್ಪತ್ರೆಗೆ ಬರದೆ ಇರುವುದರಿಂದ ನರ್ಸ್‌ಗಳೆ ವೈದ್ಯರಂತೆ ಚಿಕಿತ್ಸೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದರಿಂದ ರೋಗಿಗಳ ಪ್ರಾಣಾಪಾಯವಾದರೆ ಹೊಣೆ ಯಾರು ;

(ಊ) ಮಾಕಳಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಸರಿಯಾದ ಸಮಯಕ್ಕೆ ಕೆಲಸಕ್ಕೆ ಹಾಜರಾಗದೇ ಸಾರ್ವಜನಿಕರಿಗೆ ತೊಂದರೆಕೊಡುತ್ತಿರುವುದು ಪ್ರಶ್ನಿಸಲು ಹೋದಾಗ ಸಾರ್ವಜನಿಕರ ಮೇಲೆ ಜಾತಿನಿಂದನೆ ಕೇಸುಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಅವುಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?